# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರ ಪಾವತಿಸಲು ಜಿಲ್ಲಾಧಿಕಾರಿಗಳಿಗೆ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ (SDRF) ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕಂಇ 214 ಟಿಎನ್‌ಆರ್ 2024, ದಿನಾಂಕ: 16.08.2024.
2. ಸರ್ಕಾರದ ಆದೇಶ ಸಂಖ್ಯೆ: ಆಇ 247 ಬಿಆರ್‌ಎಸ್ 2024, ದಿನಾಂಕ: 11.11.2024.
3. ಸರ್ಕಾರದ ಇದೇ ಸಮ ಸಂಖ್ಯೆಯ ಆದೇಶ ದಿನಾಂಕ: 13.11.2024.
4. ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಏಕ ಕಡತ ಸಂಖ್ಯೆ: DCDH-CAL0CAL/41/2024 (1590242).
5. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರ ಏಕ ಕಡತ ಸಂಖ್ಯೆ: CKSDMA-DMA0ETC/20/2024 (1590145).
6. ಸರ್ಕಾರದ ಆದೇಶ ಸಂಖ್ಯೆ: ಕಂಇ 256 ಟಿಎನ್‌ಆರ್ 2024, ದಿನಾಂಕ: 26.11.2024.
7. ಸರ್ಕಾರದ ಆದೇಶ ಸಂಖ್ಯೆ: ಆಇ 312 ಬಿಆರ್‌ಎಸ್ 2024, ದಿನಾಂಕ: 05.12.2024.
8. ಸರ್ಕಾರದ ಇದೇ ಸಮ ಸಂಖ್ಯೆಯ ಆದೇಶ ದಿನಾಂಕ: 17.12.2024.
9. ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಏಕ ಕಡತ ಸಂಖ್ಯೆ: DCDH-CAL0CAL/70/2024.

* * * * *

**ಪ್ರಸ್ತಾವನೆ:**

2024-25ನೇ ಸಾಲಿನಲ್ಲಿ ನೈಸರ್ಗಿಕ ವಿಕೋಪಗಳಿಂದ ಸ್ಥಳೀಯವಾಗಿ ಉಂಟಾಗುವ ಬೆಳೆ ಹಾನಿಗೆ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ: 11.07.2023 ರಂದು ಹೊರಡಿಸಿರುವ Revised Items of Expenditure and Norms of assistance from the State Disaster Response Fund (SDRF) ರ ಮಾರ್ಗಸೂಚಿಗಳನ್ವಯ ನಿಯಮಾನುಸಾರ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ಪಾವತಿಸಬಹುದಾದ

.....2

Scanned with ACE Scanner

ಪರಿಹಾರ ಮೊತ್ತವನ್ನು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳ ಹಂತದಲ್ಲಿಯೇ ಪರಿಹಾರ ತಂತ್ರಾಂಶದ ಮುಖಾಂತರ ಮಾತ್ರವೇ ನಿಯಮಾನುಸಾರ ಅರ್ಹ ರೈತ ಫಲಾನುಭವಿಗಳಿಗೆ ಅರ್ಹತೆಗನುಗುಣವಾಗಿ ಪಾವತಿಸಲು, ಕಾರ್ಯವಿಧಾನ ಹಾಗೂ ಷರತ್ತು / ನಿಬಂಧನೆಗಳನ್ನು ಮೇಲೆ ಓದಲಾದ (1) ರ ಆದೇಶದಲ್ಲಿ ನಿಗದಿಪಡಿಸಲಾಗಿದೆ.

ರಾಜ್ಯ ವಿಪತ್ತು ಪರಿಹಾರ ನಿಧಿಯ ಲೆಕ್ಕ ಶೀರ್ಷಿಕೆಯಾದ 2245-80-102-0-01-051 ರಿಂದ ರೂ.5000.00 ಲಕ್ಷಗಳನ್ನು ಹಾಗೂ ಲೆಕ್ಕ ಶೀರ್ಷಿಕೆಯಾದ 2245-80-102-0-01-140 ರಿಂದ ರೂ.5000.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ:2245-80-102-0-01-059 ಗೆ, ಮೇಲೆ ಓದಲಾದ (2) ರ ಸರ್ಕಾರಿ ಆದೇಶದಲ್ಲಿ ಪುನರ್ ವಿನಿಯೋಗ ಮಾಡಲಾಗಿರುತ್ತದೆ.

2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ಮೇಲೆ ಓದಲಾದ (1) ರ ಆದೇಶದಲ್ಲಿ ವಿಧಿಸಿರುವ ಷರತ್ತುಗಳ ಪಾಲನೆಗೆ ಒಳಪಟ್ಟು, ಅರ್ಹತೆಯಂತೆ ನಿಯಮಾನುಸಾರ ಬೆಳೆಹಾನಿ ಪರಿಹಾರ ಮೊತ್ತವನ್ನು ಪಾವತಿಸಲು ಅನುವಾಗುವಂತೆ, ಬೆಳಗಾವಿ, ಬಾಗಲಕೋಟೆ ಮತ್ತು ಬೀದರ್ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗೆ, ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ 2245-80-102-0-01-059 ರಿಂದ ಒಟ್ಟಾರೆ ರೂ.35.00ಕೋಟಿಗಳ ಅನುದಾನವನ್ನು ಮೇಲೆ ಓದಲಾದ (3) ರ ಆದೇಶದಲ್ಲಿ ಬಿಡುಗಡೆಗೊಳಿಸಲಾಗಿರುತ್ತದೆ.

ಧಾರವಾಡ ಜಿಲ್ಲೆಯಲ್ಲಿ 2024-25 ನೇ ಸಾಲಿನ ಅಕ್ಟೋಬರ್ ಮಾಹೆಯಲ್ಲಿ ಅತಿವೃಷ್ಟಿಯಿಂದ ಒಟ್ಟು 68,727.32 ಹೆಕ್ಟೇರ್ ಬೆಳೆ ಹಾನಿ ಉಂಟಾಗಿದ್ದು ಬೆಳೆ ಹಾನಿಗೆ ಇನ್ಪುಟ್ ಸಬ್ಸಿಡಿ ಪಾವತಿಸಲು ರೂ. 6090.46 ಲಕ್ಷಗಳು ಅಗತ್ಯವಿರುವುದರಿಂದ, ಪಕೃತಿ ವಿಕೋಪ ಪಿ.ಡಿ. ಖಾತೆಗೆ ರೂ.7000.00 ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಜಿಲ್ಲಾಧಿಕಾರಿ, ಧಾರವಾಡ ರವರು ಮೇಲೆ ಓದಲಾದ (4) ರ ಏಕ ಕಡತದಲ್ಲಿ ಕೋರಿರುತ್ತಾರೆ.

ರಾಜ್ಯದಲ್ಲಿ ಜಿಲ್ಲಾವಾರು ಬೆಳೆ ಹಾನಿಯಾಗಿರುವ ಕುರಿತು ಅಂಕಿ-ಅಂಶಗಳನ್ನು ಪರಿಶೀಲಿಸಿ, ಅರ್ಹ ರೈತರಿಗೆ ಬೆಳೆ ಹಾನಿ ಪರಿಹಾರವನ್ನು ನಿಯಮಾನುಸಾರ ಪಾವತಿಸಲು ಅನುವಾಗುವಂತೆ ಬೆಳಗಾವಿ ಜಿಲ್ಲೆಗೆ ರೂ.23.00 ಕೋಟಿ (ರೂ.13 ಕೋಟಿ ಮುಂಗಾರು ಅವಧಿಯ ಬೆಳೆ ಹಾನಿಗೆ ಹಾಗೂ ರೂ. 10 ಕೋಟಿ ಹಿಂಗಾರು ಅವಧಿಯ ಬೆಳೆ ಹಾನಿಗೆ), ಬಾಗಲಕೋಟೆ ಜಿಲ್ಲೆಗೆ ಹಿಂಗಾರು ಅವಧಿಯ ಬೆಳೆ ಹಾನಿಗೆ ರೂ. 5.00 ಕೋಟಿ, ಹಾವೇರಿ ಜಿಲ್ಲೆಗೆ ಹಿಂಗಾರು ಅವಧಿಯ ಬೆಳೆ ಹಾನಿಗೆ ರೂ. 50.00 ಕೋಟಿಗಳನ್ನು, ಧಾರವಾಡ ಜಿಲ್ಲೆಗೆ ಹಿಂಗಾರು ಅವಧಿಯ ಬೆಳೆ ಹಾನಿಗೆ ರೂ. 55.00 ಕೋಟಿ ಮತ್ತು ಚಿಕ್ಕಮಗಳೂರು ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಕಡಿಮೆ ಮೊತ್ತ ಇರುವುದರಿಂದ ಕ್ರಮವಾಗಿ ರೂ. 5.00 ಕೋಟಿ ಮತ್ತು ರೂ.3.00 ಕೋಟಿಗಳನ್ನು ಸೇರಿ ಒಟ್ಟಾರೆ ರೂ.141.00 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಬಹುದಾಗಿದೆ ಎಂದು ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರು ಮೇಲೆ ಓದಲಾದ (5) ರ ಏಕ ಕಡತದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.



Scanned with ACE Scanner

ರಾಜ್ಯ ವಿಪತ್ತು ಪರಿಹಾರ ನಿಧಿಯ ಲೆಕ್ಕ ಶೀರ್ಷಿಕೆ: 2245-80-102-0-01-059 ರಡಿ ಲಭ್ಯವಿದ್ದ ಒಟ್ಟು ರೂ.65.00 ಕೋಟಿಗಳ ಅನುದಾನದಲ್ಲಿ ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಪ್ರಸ್ತಾವನೆ ಹಾಗೂ ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರ ಶಿಫಾರಸ್ಸನ್ನು ಕೂಲಂಕಷವಾಗಿ ಪರಿಶೀಲಿಸಿ, 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ಪಿ.ಡಿ. ಖಾತೆಯಿಂದ ದಿನಾಂಕ: 16.08.2024 ರ ಸರ್ಕಾರದ ಆದೇಶದಂತೆ ಪಾವತಿಸಲು ಅನುವಾಗುವಂತೆ, ಬೆಳಗಾವಿ, ಧಾರವಾಡ, ಬಾಗಲಕೋಟೆ ಹಾಗೂ ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಗಳಿಗೆ ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ:2245-80-102-0-01-059 ರಿಂದ ಒಟ್ಟಾರೆ ರೂ. 65.00 ಕೋಟಿಗಳನ್ನು ಮೇಲೆ ಓದಲಾದ (6) ರ ಆದೇಶದಲ್ಲಿ ಬಿಡುಗಡೆಗೊಳಿಸಲಾಗಿದೆ.

ರಾಜ್ಯ ವಿಪತ್ತು ಪರಿಹಾರ ನಿಧಿಯ ಲೆಕ್ಕ ಶೀರ್ಷಿಕೆಯಾದ 2245-80-102-0-01-059 ರಲ್ಲಿ ಅನುದಾನ ಲಭ್ಯವಿಲ್ಲದಿದ್ದ ಕಾರಣ, ಲೆಕ್ಕ ಶೀರ್ಷಿಕೆಯಾದ 2245-80-102-0-01-140 ರಿಂದ ರೂ. 9000.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ: 2245-80-102-0-01-059 ಗೆ ಮೇಲೆ ಓದಲಾದ (7) ರ ಸರ್ಕಾರಿ ಆದೇಶದಲ್ಲಿ ಪುನರ್ ವಿನಿಯೋಗ ಮಾಡಲಾಗಿರುತ್ತದೆ.

ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಪ್ರಸ್ತಾವನೆ ಹಾಗೂ ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರ ಶಿಫಾರಸ್ಸನ್ನು ಕೂಲಂಕಷವಾಗಿ ಪರಿಶೀಲಿಸಿ, ಲೆಕ್ಕ ಶೀರ್ಷಿಕೆ 2245-80-102-0-01-059 ರಲ್ಲಿ ಲಭ್ಯವಿರುವ ಅನುದಾನದಿಂದ ಹಾವೇರಿ ಜಿಲ್ಲೆಗೆ ಬೆಳೆ ಹಾನಿ ಪರಿಹಾರ ಪಾವತಿಸಲು ಹಾವೇರಿ ಜಿಲ್ಲಾಧಿಕಾರಿಗಳ ಪಿ. ಡಿ. ಖಾತೆಗೆ ರೂ. 27.00 ಕೋಟಿಗಳನ್ನು ಹಾಗೂ ಧಾರವಾಡ ಜಿಲ್ಲೆಗೆ ಬೆಳೆ ಹಾನಿ ಪರಿಹಾರ ಪಾವತಿಸಲು ಈಗಾಗಲೇ ಬಿಡುಗಡೆ ಮಾಡಿರುವ ರೂ. 36.00 ಕೋಟಿಗಳನ್ನು ಹೊರತುಪಡಿಸಿ ಉಳಿದ ರೂ. 05.00 ಕೋಟಿಗಳನ್ನು ಧಾರವಾಡ ಜಿಲ್ಲಾಧಿಕಾರಿಗಳ ಪಿ. ಡಿ. ಖಾತೆಗೆ ಓದಲಾದ (8) ರ ಸರ್ಕಾರದ ಆದೇಶದಲ್ಲಿ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ.

ಓದಲಾದ (9) ರ ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಏಕ ಕಡತ ಸಂಖ್ಯೆ: DCDH-CAL0CAL/70/2024 ರಲ್ಲಿ ಸರ್ಕಾರದ ಆದೇಶ ಸಂಖ್ಯೆ: ಕಂಇ 256 ಟಿಎನ್ಆರ್ 2024, ದಿನಾಂಕ: 26.11.2024 ರಲ್ಲಿ ರೂ. 36.00 ಕೋಟಿಗಳನ್ನು ಹಾಗೂ ಕಂಇ 256 ಟಿಎನ್ಆರ್ 2024, ದಿನಾಂಕ: 17.12.2024 ರಲ್ಲಿ ರೂ. 05.00 ಕೋಟಿಗಳನ್ನು ಒಟ್ಟಾರೆಯಾಗಿ ಧಾರವಾಡ ಜಿಲ್ಲೆಗೆ ರೂ. 41.00 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದ್ದು, ಆದಾಗ್ಯೂ, ಬೆಳೆಹಾನಿ ಪರಿಹಾರ ಪಾವತಿಸುವ ಕುರಿತು ರೂ. 05.00 ಕೋಟಿಗಳನ್ನು ಹೆಚ್ಚುವರಿಯಾಗಿ ಬಿಡುಗಡೆಗೊಳಿಸುವಂತೆ ಕೋರಿರುತ್ತಾರೆ.

.....4

Scanned with ACE Scanner

ಜಿಲ್ಲಾಧಿಕಾರಿ, ಧಾರವಾಡ ಜಿಲ್ಲೆ ರವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಲೆಕ್ಕ ಶೀರ್ಷಿಕೆ 2245-80-102-0-01-059 ರಲ್ಲಿ ಲಭ್ಯವಿರುವ ಅನುದಾನದಿಂದ ಧಾರವಾಡ ಜಿಲ್ಲೆಗೆ ಬೆಳೆ ಹಾನಿ ಪರಿಹಾರ ಪಾವತಿಸಲು ಹೆಚ್ಚುವರಿಯಾಗಿ ರೂ. 20.00 ಲಕ್ಷಗಳನ್ನು ಧಾರವಾಡ ಜಿಲ್ಲಾಧಿಕಾರಿಗಳ ಪಿ. ಡಿ. ಖಾತೆಗೆ ಅನುದಾನ ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕಂಇ 256 ಟಿಎನ್‌ಆರ್ 2024,**
**ಬೆಂಗಳೂರು; ದಿನಾಂಕ: 31.12.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25 ನೇ ಸಾಲಿನಲ್ಲಿ ಅತೀವೃಷ್ಟಿ / ಪ್ರವಾಹದಿಂದ ಉಂಟಾದ ಬೆಳೆಹಾನಿಗೆ ಪರಿಹಾರವನ್ನು ಜಿಲ್ಲಾಧಿಕಾರಿರವರ ಹಂತದಲ್ಲಿಯೇ ದಿನಾಂಕ: 16.08.2024 ರ ಸರ್ಕಾರದ ಆದೇಶ ಸಂಖ್ಯೆ: ಕಂಇ 214 ಟಿಎನ್‌ಆರ್ 2024 ರಲ್ಲಿ ವಿಧಿಸಿರುವ ಷರತ್ತುಗಳ ಪಾಲನೆಗೊಳಪಟ್ಟು, ಅರ್ಹತೆಯಂತೆ ನಿಯಮಾನುಸಾರ ಬೆಳೆಹಾನಿ ಪರಿಹಾರ ಮೊತ್ತವನ್ನು ಪರಿಶೀಲಿಸಿ ಪಾವತಿಸಲು ಜಿಲ್ಲಾಧಿಕಾರಿ, ಧಾರವಾಡ ರವರ ಪಿ.ಡಿ. ಖಾತೆಗೆ ರಾಜ್ಯ ವಿಪತ್ತು ಪರಿಹಾರಿ ನಿಧಿ ಲೆಕ್ಕ ಶೀರ್ಷಿಕೆ: 2245-80-102-0-01-059 ರಿಂದ ರೂ. 20.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಅನುದಾನದ ಬಳಕೆಯಲ್ಲಿ ಯಾವುದೇ ಲೋಪ ದೋಷಗಳು ಕಂಡು ಬಂದಲ್ಲಿ ನೇರವಾಗಿ ಜಿಲ್ಲಾಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆಗೊಳಿಸಲಾಗಿದೆಯೋ ಅದೇ ಉದ್ದೇಶಕ್ಕೆ ಜಿಲ್ಲಾಧಿಕಾರಿಗಳು ಬಳಸತಕ್ಕದ್ದು. ನಿಯಮಾನುಸಾರ ಬಳಕೆಯ ನಂತರ ಉಪಯೋಗಿತಾ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಗಳು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 540/ವೆಚ್ಚ-7/2023, ದಿನಾಂಕ: 07.12.2024 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್. ಶಿವಶಂಕರ್)
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಹಾಗೂ ನೋಂ & ಮು)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E) ಹಾಗೂ (E & RSA), ಕರ್ನಾಟಕ, ಪಿ.ಬಿ.ನಂ. 5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.

.....5

Scanned with ACE Scanner

2. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ, ಪಿ.ಬಿ.ನಂ. 5398, ಪಾರ್ಕ್ ಹೌಸ್ ರೋಡ್, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬೆಂಗಳೂರು.
5. ಜಿಲ್ಲಾಧಿಕಾರಿಗಳು - ಧಾರವಾಡ ಜಿಲ್ಲೆ.
6. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನ ಸೌಧ, ಬೆಂಗಳೂರು.

**ಪ್ರತಿ:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿರವರುಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
5. ಲೆಕ್ಕ ಪತ್ರ ಶಾಖೆ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Scanned with ACE Scanner